# ಉಪತಹಶೀಲ್ದಾರರು, ಹಿರೇಹಡಗಲಿ ಇವರ ನ್ಯಾಯಾಲಯದಲ್ಲಿ

| ಅರ್ಜಿದಾರರು | ತಕರಾರುದಾರರು |
|---|---|
| ಸಾಲಮನಿ ಉರ್ಫ ಬಾವಿ ಮಹೇಶಪ್ಪ ತಂದೆ ಲೇಟ್ ಚನ್ನಬಸಪ್ಪ ,<br>ಹ್ಯಾರಡ ಗ್ರಾಮ, ಹಡಗಲಿ ತಾ. | ಬಾವಿ ಉರ್ಫ ಸಾಲ್ಮನಿ ಭೀಮಪ್ಪ ತಂದೆ ಬಸವಣ್ಣೆಪ್ಪ ,<br>ಹ್ಯಾರಡ ಗ್ರಾಮ, ಹಡಗಲಿ ತಾ. |

ವಿವಾದಿತ ಜಮೀನಿನ ವಿವರ:

| ಕ್ರ.ಸಂ. | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ | ತರಹೆ |
|---|---|---|---|---|
| 1. | ಹ್ಯಾರಡ | 159/ಹೆಚ್ | 2–59 | ಖುಷ್ಕಿ |
| 2. | ,, | 193/ಡಿ | 3–03 | ,, |
| 3. | ,, | 194/ಎ | 0–13 | ,, |
| 4. | ,, | 199/ಬಿ | 1–87 | ,, |

**ಪೀಠಿಕೆ:–**

ಬಳ್ಳಾರಿ ಜಿಲ್ಲೆ ಹೂವಿನಹಡಗಲಿ ತಾಲೂಕಿನ ಹ್ಯಾರಡ ಗ್ರಾಮದ ಮೇಲ್ಕಂಡ ಜಮೀನಿಗೆ ಸಂಬಂಧಿಸಿದಂತೆ, ಹ್ಯಾರಡ ಗ್ರಾಮದ ನಿವಾಸಿಯಾದ ಸಾಲಮನಿ ಉರ್ಫ ಬಾವಿ ಮಹೇಶಪ್ಪ ತಂದೆ ಲೇಟ್ ಚನ್ನಬಸಪ್ಪ ಇವರು ದಿ:11–7–2016 ರಂದು ಪೋತಿ ವಾರಸಾ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ–21 ರ ನೋಟೀಸು ದಿ:28–7–2016 ರಂದು ಜಾರಿ ಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿ:26–8–2016 ರಂದು ಬಾವಿ ಉರ್ಫ ಸಾಲ್ಮನಿ ಭೀಮಪ್ಪ ತಂದೆ ಬಸವಣ್ಣೆಪ್ಪ, ಹ್ಯಾರಡ ಇವರು ತಕರಾರು ಅರ್ಜಿ ಸಲ್ಲಿಸಿರುತ್ತಾರೆ. ಕಾರಣ ಎಂ.ಆರ್.ಸಂಖ್ಯೆ 03/2016–17 ರ ಕಡತವು ತಕರಾರು ಕಡತವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಹಿರೇಹಡಗಲಿ ರವರು ಈ ಕಾರ್ಯಾಲಯಕ್ಕೆ ವಿಚಾರಣೆಗೆ ಸಲ್ಲಿಸಿರುತ್ತಾರೆ. ಉಭಯ ಪಕ್ಷದವರಿಗೆ ಕೇಳಿಕೊಳ್ಳುವ ಅವಕಾಶ ನೀಡಿ ದಿ:27–6–2013 ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸ್ ನೀಡಲಾಯಿತು.

ಅರ್ಜಿದಾರರು ಮತ್ತು ತಕರಾರುದಾರರು ಸದರಿ ಪ್ರಕರಣದ ವಿಚಾರಣೆಗೆ ಹಾಜರಾಗಿರುತ್ತಾರೆ. ತಕರಾರುದಾರರು ಹಾಜರಾಗಿ ತಾವು ಅರ್ಜಿದಾರರೊಂದಿಗೆ ರಾಜಿಯಾಗಿರುವುದಾಗಿ ಲಿಖಿತ ರಾಜೀ ಪತ್ರ ಸಲ್ಲಿಸಿರುತ್ತಾರೆ. ಮತ್ತು ಅರ್ಜಿದಾರರ ಹೆಸರಿಗೆ ಹಕ್ಕು ಬದಲಾವಣೆ ಮಾಡಬಹುದೆಂದು, ತಕರಾರನ್ನು ವಾಪಸ್ಸು ಪಡೆದಿರುವುದಾಗಿ ತಿಳಿಸಿದರು. ಅರ್ಜಿದಾರರ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ಯಾವುದೇ ತಕರಾರು ಇರದಿರುವುದರಿಂದ ಈ ಕೆಳಕಂಡಂತೆ ಆದೇಶ.

ಸಂ/ಕಂ/ಪಹಣಿ/ವಿವಾದ/06/2016–17

ದಿನಾಂಕ:17–10–2016 .

## ಆದೇಶ

ಪೀಠಿಕೆಯಲ್ಲಿ ವಿವರಿಸಿದ ಅಂಶಗಳು ಹಾಗೂ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 128 ಮತ್ತು 129 ರ ಪ್ರಕಾರ ಎಂ.ಆರ್.ಸಂಖ್ಯೆ 03/2016–17 ರ ಪ್ರಕರಣದಲ್ಲಿ ಅರ್ಜಿದಾರರ ಅರ್ಜಿಯನ್ನು ಪುರಸ್ಕರಿಸುತ್ತಾ ಪೋತಿ ವಾರಸಾ ಪ್ರಕಾರ ಹಕ್ಕು ಬದಲಾವಣೆ ಮಾಡಲು ಆದೇಶಿಸಿದೆ.

ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,
ಹಿರೇಹಡಗಲಿ.

ಪ್ರತಿಯನ್ನು

1. ವಾದಿ ಮತ್ತು ಪ್ರತಿವಾದಿಗಳಿಗೆ
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹೂವಿನಹಡಗಲಿ ಇವರಿಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
3. ಕಛೇರಿ ಕಡತಕ್ಕೆ ಶುದ್ಧಪ್ರತಿ.